ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ -

ಉದಯವಾಣಿ ಬೆಂಗಳೂರು
ಬುಧವಾರ, ಮಾರ್ಚ್ 14, 2018

# ಮಹಿಳೆಯರು ವಿಶಾಲ ಚಿಂತನೆ ಅಳವಡಿಸಿಕೊಳ್ಳಿ

**ದೊಡ್ಡಬಳ್ಳಾಪುರ:** ಮಹಿಳಾ ದಿನಾಚರಣೆ ಆಚರಿಸುವ ಮೂಲಕ ಆಕೆಯ ಪ್ರಗತಿಯನ್ನು ಗುರುತಿಸುತ್ತಿರುವುದು ಸಂತಸದ ವಿಷಯ. ಸ್ವಾಭಿಮಾನಿ, ವಿಶಾಲ ಚಿಂತನೆಗಳನ್ನು ಮಹಿಳೆಯರು ರೂಢಿಸಿಕೊಳ್ಳುವ ಮೂಲಕ ಸಮಾಜದ ಮುಖ್ಯವಾಹಿನಿ ಬರಬೇಕೆಂದು ಬಾಶೆಟ್ಟಿಹಳ್ಳಿ ಗ್ರಾಪಂ ಅಭಿವೃದ್ಧಿ ಅಧಿಕಾರಿ ಕುಮಾರ್ ತಿಳಿಸಿದರು.ತಾಲೂಕಿನ ಬಾಶೆಟ್ಟಿಹಳ್ಳಿಯ ಅಂಗನವಾಡಿ ಮಾದರಿ ಕಲಿಕಾ ಕೇಂದ್ರದಲ್ಲಿ ಮಕ್ಕಳ ಜಾಗೃತಿ ಸಂಸ್ಥೆ ವತಿಯಿಂದ ನಡೆದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪ್ರತಿಯೊಂದು ಕುಟುಂಬದಲ್ಲೂ ಮಹಿಳೆಯ ಅಗತ್ಯ ಎಷ್ಟು ಎಂಬುದು ಗೊತ್ತಿರುತ್ತದೆ. ಮಹಿಳೆಯರಿಗೆ ಆಗುತ್ತಿದ್ದ ಅನ್ಯಾಯ, ಸಾಮಾಜಿಕ ಶೋಷಣೆ, ಸಮಾನತೆಗೆ ಮತ್ತು ಶಿಕ್ಷಣ ದೊರೆಯುವಂತಾಗಲು ಹಲವಾರು ಮಹನೀಯರು ನಿರಂತರ ಹೋರಾಟ ಮಾಡಿದ್ದಾರೆ. ಇಂತಹವರ ಉದ್ದೇಶಗಳನ್ನು ನಾವು ಸ್ಮರಿಸಬೇಕು ಎಂದರು. ಬಾಶೆಟ್ಟಿಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಕೃಷ್ಣಪ್ಪ ಮಾತನಾಡಿ, ಮಹಿಳೆಯರು ಎಲ್ಲಾ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಕುಟುಂಬದ ಹೊಣೆಗಾರಿಕೆಯಲ್ಲಿ ಮಹಿಳೆಯ ಪಾತ್ರ ಮಹತ್ವದ್ದಾಗಿದೆ. ಹೆಣ್ಣನ್ನು ದೇವರಿಗೆ ಸಮ ಎಂದು ಹೇಳುತ್ತಲೇ ಆಕೆಯನ್ನು ನಿರಂತರವಾಗಿ ಶೋಷಣೆ ಮಾಡುವುದು ಶೋಭೆ ತರುವಂತದ್ದಲ್ಲ ಎಂದರು. ಮಕ್ಕಳ ಜಾಗೃತಿ ಸಂಸ್ಥೆಯ ಸಂಚಾಲಕ ಹನುಮಂತ್ ಮಾತನಾಡಿ, ಅಮೆರಿಕಾದಲ್ಲಿ ಮಹಿಳೆಯರಿಗೆ ತೋರುತ್ತಿದ್ದ ತಾರತಮ್ಯದ ವಿರುದ್ಧ ಸಿಡಿದೆದ್ದ ಮಹಿಳೆಯರು 1910 ರಲ್ಲಿ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನ ಏರ್ಪಡಿಸಿ, ಮಹಿಳಾ ದಿನಾಚರಣೆ ಆಚರಿಸಲು ತೀರ್ಮಾನಿಸಲಾಯಿತು. ಪ್ರಪಂಚದಲ್ಲಿ ಮಹಿಳೆಯರಿಗೆ ಸಮಾಜದಲ್ಲಿ ಸಮಾನ ಹಕ್ಕುಗಳು ದೊರೆಯುವಂತಾಗಬೇಕು ಎನ್ನುವ ಆಶಯಗಳು ಈಡೇರಬೇಕಿದೆ ಎಂದರು. ಕಾರ್ಯಕ್ರಮದಲ್ಲಿ ಬಾಶೆಟ್ಟಿಹಳ್ಳಿ ಗ್ರಾಪಂ ಅಧ್ಯಕ್ಷೆ ನಾರಾಯಣಮ್ಮ, ಉಪಾಧ್ಯಕ್ಷೆ ಶಿಲ್ಪಾ, ಸದಸ್ಯರಾದ ರಾಧಾಮಣಿ, ನೇತ್ರಾವತಿ, ಸಿದ್ದಪ್ಪ, ಮುನಿರಾಜು, ರೂಪಾ, ರತ್ನಮ್ಮ, ಅಂಬರೀಶ್, ಬೋರಲಿಂಗಯ್ಯ, ರಾಧಾಮಣಿ, ಮಕ್ಕಳ ಜಾಗೃತಿ ಸಂಸ್ಥೆಯ ಅಂಥೋಣಿ ಹಾಗೂ ಅಂಗನವಾಡಿ ಶಿಕ್ಷಕರು, ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.



ದೊಡ್ಡಬಳ್ಳಾಪುರ ತಾಲೂಕಿನ ಬಾಶೆಟ್ಟಿಹಳ್ಳಿಯ ಅಂಗನವಾಡಿ ಮಾದರಿ ಕಲಿಕಾ ಕೇಂದ್ರದಲ್ಲಿ ನಡೆದ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಬಾಶೆಟ್ಟಿಹಳ್ಳಿ ಗ್ರಾಪಂ ಅಧ್ಯಕ್ಷೆ ನಾರಾಯಣಮ್ಮ ಉದ್ಘಾಟಿಸಿದರು.